ಶಾಲಾ ಶಿಕ್ಷಣ ಇಲಾಖೆ
ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತು
**Karnataka School Quality Assessment & Accreditation Council**
ಕೆ.ಎಸ್.ಇ.ಎ.ಬಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–03. ದೂರವಾಣಿ ಸಂಖ್ಯೆ: 23341615, 23562283, 29720300
ಫ್ಯಾಕ್ಸ್: 080–23347670, e-mail: ksqaacbangalore@gmail.com & ksqaacbengaluru@gmail.com

ಸಂಖ್ಯೆ: ಕೆ4/5, 8 ಮತ್ತು 9ನೇ.ಮೌ/06/2023–24 ದಿನಾಂಕ: 07.03.2024

# ಜ್ಞಾಪನ

ವಿಷಯ:– 2023–24ನೇ ಸಾಲಿನಲ್ಲಿ ರಾಜ್ಯ ಪಠ್ಯಕ್ರಮ ಅನುಸರಿಸುತ್ತಿರುವ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಶಾಲೆಗಳ 5, 8 ಮತ್ತು 9ನೇ ತರಗತಿ ವಿದ್ಯಾರ್ಥಿಗಳಿಗೆ ದಿನಾಂಕ: 11.03.2024 ರಿಂದ ಮೌಲ್ಯಾಂಕನವನ್ನು ನಡೆಸುವ ಬಗ್ಗೆ.

ಉಲ್ಲೇಖ :– 1. ಸರ್ಕಾರದ ಆದೇಶ ಸಂಖ್ಯೆ ಇಪಿ 209 ಎಸ್ಎಲ್‌ಬಿ 2023, ದಿನಾಂಕ: 16.11.2023
2. ಈ ಕಛೇರಿ ಮಾರ್ಗಸೂಚಿ ಸಮಸಂಖ್ಯೆ ದಿನಾಂಕ: 22.02.2024
3. ಈ ಕಛೇರಿ ಪತ್ರ ಸಮಸಂಖ್ಯೆ ದಿನಾಂಕ: 05.01.2024

~*~*~*~

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ (1) ಮತ್ತು (2) ರನ್ವಯ 2023–24ನೇ ಸಾಲಿನಲ್ಲಿ ರಾಜ್ಯ ಪಠ್ಯಕ್ರಮ ಅನುಸರಿಸುತ್ತಿರುವ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಶಾಲೆಗಳ 5, 8 ಮತ್ತು 9ನೇ ತರಗತಿಯ ವಿದ್ಯಾರ್ಥಿಗಳಿಗೆ ಸಂಕಲನಾತ್ಮಕ ಮೌಲ್ಯಮಾಪನ–2 (SA-2) ಕಾರ್ಯವನ್ನು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯ ಕೆ.ಎಸ್.ಕ್ಯು.ಎ.ಎ.ಸಿ ವತಿಯಿಂದ ನಡೆಸಲಾಗುತ್ತಿದೆ.

ಸದರಿ ಮೌಲ್ಯಾಂಕನವನ್ನು ಹೈ ಕೋರ್ಟ್ ಏಕಸದಸ್ಯ ಪೀಠವು ರದ್ದುಪಡಿಸಿ ನೀಡಿದ್ದ ತೀರ್ಪಿಗೆ ವಿಭಾಗೀಯ ಪೀಠವು ಮಧ್ಯಂತರ ತಡೆಯಾಜ್ಞೆ ನೀಡಿರುತ್ತದೆ. ಅದರಂತೆ ಉಲ್ಲೇಖ (3) ರ ನಿಗದಿತ ವೇಳಾಪಟ್ಟಿಯಂತೆ 5ನೇ ತರಗತಿಯ ವಿದ್ಯಾರ್ಥಿಗಳಿಗೆ **ದಿನಾಂಕ: 11.03.2024 ರಿಂದ 14.03.2024 ರವರೆಗೆ** ಹಾಗೂ 8 ಮತ್ತು 9ನೇ ತರಗತಿ ವಿದ್ಯಾರ್ಥಿಗಳಿಗೆ **ದಿನಾಂಕ: 11.03.2024 ರಿಂದ 18.03.2024 ರವರೆಗೆ** ಮೌಲ್ಯಾಂಕನವನ್ನು ವ್ಯವಸ್ಥಿತವಾಗಿ ಕೈಗೊಳ್ಳಲು ಈ ಮೂಲಕ ತಿಳಿಸಿದೆ. ಇನ್ನುಳಿದಂತೆ ಉಲ್ಲೇಖ (2) ರ ಈ ಕಛೇರಿ ಮಾರ್ಗಸೂಚಿಯನ್ವಯ ಕ್ರಮವಹಿಸುವುದು.

ಉಲ್ಲೇಖ(2) ರ ಸುತ್ತೋಲೆಯಲ್ಲಿ ರಾಜ್ಯ ಕಛೇರಿಯಿಂದ ಪ್ರಶ್ನೆಪತ್ರಿಕೆಗಳನ್ನು ಮಾತ್ರ ಒದಗಿಸಲಾಗುತ್ತಿದ್ದು, ವಿದ್ಯಾರ್ಥಿಗಳು ಉತ್ತರಿಸಬೇಕಾದ ಹಾಳೆಗಳೊಂದಿಗೆ ಮೌಲ್ಯಾಂಕನಕ್ಕೆ ಹಾಜರಾಗುವಂತೆ ಶಾಲೆಗಳ ಮುಖ್ಯ ಶಿಕ್ಷಕರು/ಪ್ರಾಂಶುಪಾಲರುಗಳಿಗೆ ತಿಳಿಸಲಾಗಿತ್ತು. ಆದರೆ ಪ್ರಸ್ತುತ ಉತ್ತರಿಸುವ ಹಾಳೆಗಳಿಗೆ ಅಗತ್ಯವಿರುವ ಅನುದಾನವನ್ನು ಮಂಡಲಿಯಿಂದಲೇ ಭರಿಸಲಾಗುತ್ತಿದ್ದು, ಮೌಲ್ಯಾಂಕನಕ್ಕೆ ಹಾಜರಾಗುವ ಪ್ರತಿ ವಿದ್ಯಾರ್ಥಿಗೆ 4 ಪುಟಗಳ ಒಂದು ಹಾಳೆಗೆ ಅಂದಾಜು 1/– ರೂ ತಗಲುವಂತೆ ವಿದ್ಯಾರ್ಥಿಗಳಿಗೆ ಉತ್ತರಿಸುವ ಹಾಳೆಗಳನ್ನು ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರು ಶಾಲಾ ಹಂತದಿಂದ ಒದಗಿಸುವುದು. 5ನೇ ತರಗತಿ ವಿದ್ಯಾರ್ಥಿಗಳಿಗೆ ಪ್ರತಿ ವಿಷಯಕ್ಕೆ ಗರಿಷ್ಠ 4 ಪುಟಗಳ 1 ಹಾಳೆ, 8ನೇ ತರಗತಿಯ ವಿದ್ಯಾರ್ಥಿಗಳಿಗೆ ಪ್ರತಿ ವಿಷಯಕ್ಕೆ ಗರಿಷ್ಠ 4 ಪುಟಗಳ 2 ಹಾಳೆ ಹಾಗೂ 9ನೇ ತರಗತಿಯ ವಿದ್ಯಾರ್ಥಿಗಳಿಗೆ ಪ್ರತಿ ವಿಷಯಕ್ಕೆ ಗರಿಷ್ಠ 4 ಪುಟಗಳ 3 ಹಾಳೆ ಮೀರದಂತೆ ತಗಲುವ

ಅಂದಾಜು ವೆಚ್ಚವನ್ನು ಮಂಡಲಿಯಿಂದ ಭರಿಸಲಾಗುವುದು. ಈ ಎಲ್ಲಾ ಅಂಶಗಳನ್ನು ಉಪನಿರ್ದೇಶಕರು(ಆಡಳಿತ) ಮತ್ತು ಕ್ಷೇತ್ರಶಿಕ್ಷಣಾಧಿಕಾರಿಗಳು ರಾಜ್ಯ ಪಠ್ಯಕ್ರಮ ಅನುಸರಿಸುತ್ತಿರುವ ಎಲ್ಲಾ ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರಿಗೆ ತಿಳಿಸುವುದು ಹಾಗೂ ಈ ಸಂಬಂಧ ಸೂಕ್ತ ಕ್ರಮವಹಿಸಲು ತಿಳಿಸಿದೆ.

**ಪ್ರತಿ ವಿದ್ಯಾರ್ಥಿಗೆ ಮಂಡಲಿಯ ವತಿಯಿಂದ ಭರಿಸುವ ಅನುದಾನದ ವಿವರ:**

| ತರಗತಿ | ಒಟ್ಟು ವಿಷಯಗಳ ಸಂಖ್ಯೆ | ಅಂದಾಜು ಹಾಳೆಗಳ ಸಂಖ್ಯೆ (ಪ್ರತಿ ವಿಷಯಕ್ಕೆ) **Ruled Sheet** | ಪ್ರತಿ ವಿದ್ಯಾರ್ಥಿಗೆ ತಗಲುವ ಅಂದಾಜು ವೆಚ್ಚ ರೂ.ಗಳಲ್ಲಿ (ಎಲ್ಲಾ ವಿಷಯಗಳನ್ನು ಒಳಗೊಂಡಂತೆ) |
|---|---|---|---|
| 5ನೇ ತರಗತಿ ಪ್ರತಿ ವಿದ್ಯಾರ್ಥಿಗೆ | 4 | 1 | 4/- |
| 8ನೇ ತರಗತಿ ಪ್ರತಿ ವಿದ್ಯಾರ್ಥಿಗೆ | 6 | 2 | 12/- |
| 9ನೇ ತರಗತಿ ಪ್ರತಿ ವಿದ್ಯಾರ್ಥಿಗೆ | 6 | 3 | 18/- |

{ಮಾನ್ಯ ಅಧ್ಯಕ್ಷರಿಂದ ಅನುಮೋದಿಸಲ್ಪಟ್ಟಿದೆ}

7/3/2024

ಕಾರ್ಯನಿರ್ವಾಹಕ ನಿರ್ದೇಶಕರು
ಕೆ.ಎಸ್.ಕ್ಯು.ಎ.ಸಿ

ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ:-

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ ಮತ್ತು ಅಭಿವೃದ್ಧಿ) ರವರಿಗೆ.
2. ರಾಜ್ಯದ ಎಲ್ಲಾ 5, 8 ಮತ್ತು 9ನೇ ತರಗತಿ ಮೌಲ್ಯಾಂಕನದ ಜಿಲ್ಲಾ ಹಾಗೂ ತಾಲ್ಲೂಕು ನೋಡಲ್ ಅಧಿಕಾರಿಗಳಿಗೆ.
3. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು ಮತ್ತು ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿಗಳಿಗೆ.
4. ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರು (ಕ್ಷೇತ್ರಶಿಕ್ಷಣಾಧಿಕಾರಿಗಳ ಮೂಲಕ).

**ಪ್ರತಿಯನ್ನು ಗೌರವಪೂರ್ವಕವಾಗಿ ಮಾಹಿತಿಗಾಗಿ,**

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು ರವರಿಗೆ,
2. ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ,
3. ಮಾನ್ಯ ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಬೆಂಗಳೂರು ರವರಿಗೆ,
4. ಕಛೇರಿ ಪ್ರತಿ.